ದಿನಾಂಕ: 21.06.2022 ರಂದು ಬೆಳಗ್ಗೆ 10.30 ಗಂಟೆಗೆ ಕಾಮಾಕ್ಷಿಪಾಳ್ಯ ವಾರ್ಡ್ ನಂ. 101 ರಲ್ಲಿ ಶ್ರೀ ಎ. ಸತ್ಯನಾರಾಯಣರಾಜ್, ನೋಡಲ್ ಅಧಿಕಾರಿ ರವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯ ನಡುವಳಿಗಳ ವಿವರ:-

**ಹಾಜರಿದ್ದ ಪಾಲಿಕೆಯ ಅಧಿಕಾರಿಗಳು ಹಾಗೂ ವಾರ್ಡ್ ಕಮಿಟಿ ಸದಸ್ಯರು:-**

1. ಶ್ರೀ ಎ. ಸತ್ಯನಾರಾಯಣರಾಜ್, ನೋಡಲ್ ಅಧಿಕಾರಿಗಳು ಹಾಗೂ ಸದಸ್ಯರು
2. ಶ್ರೀ ಪೂಜಾರಪ್ಪ, ಸಹಾಯಕ ಅಭಿಯಂತರರು, ವಾರ್ಡ್ ನಂ. 101 ಕಾಮಾಕ್ಷಿಪಾಳ್ಯ
3. ಶ್ರೀ ವೆಂಕಟೇಶ್, ಬಿಲ್ ಕಲೆಕ್ಟರ್
4. ಶ್ರೀ ಭರತ್, ಸ್ಥಳೀಯರು

ದಿನಾಂಕ: 04.06.2022 ರಂದು ನಡೆದ ಸಭೆಯಲ್ಲಿ ಹಲವಾರು ವಿಷಯಗಳನ್ನು ಚರ್ಚಿಸಿ, ಅದಕ್ಕೆ ಸಂಬಂಧಪಟ್ಟ ವಿಷಯಗಳಿಗೆ ಪರಿಹಾರ ತೆಗೆದುಕೊಳ್ಳಲಾಗಿರುತ್ತದೆ. ಹಾಗು ದಿನಾಂಕ: 21.06.2022ರ ಬೆಳಗ್ಗೆ 10.30 ಗಂಟೆಗೆ ವಾರ್ಡ್ ನಂ. 101 ಕಾಮಾಕ್ಷಿಪಾಳ್ಯ ಎಸ್.ಬಿ.ಐ. ಆಫೀಸರ್ಸ್ ಸಮುದಾಯ ಭವನ, ಎಸ್.ಬಿ.ಐ. ಕಾಲೋನಿ, ಬಸವೇಶ್ವರನಗರ, ಕಾಮಾಕ್ಷಿಪಾಳ್ಯ, ಇಲ್ಲಿ ಪಾಲಿಕೆ ಅಧಿಕಾರಿಗಳೊಂದಿಗೆ ಸಭೆಯನ್ನು ಕೈಗೊಂಡು ಈ ಕೆಳಗಿನ ವಿಷಯಗಳನ್ನು ಚರ್ಚಿಸಲಾಯಿತು.

1. ವಾರ್ಡ್ ವ್ಯಾಪ್ತಿಯಲ್ಲಿ ರಸ್ತೆ ಗುಂಡಿಗಳು ಬಿದ್ದಿರುವುದರಿಂದ ತುರ್ತಾಗಿ ಗುಂಡಿಗಳನ್ನು ಮುಚ್ಚಲು ಕ್ರಮ ಕೈಗೊಳ್ಳಬೇಕೆಂದು ಸಾರ್ವಜನಿಕರು ದೂರುಗಳ ಮುಖಾಂತರ ತಿಳಿಸಿದರು. ಇದಕ್ಕೆ ಉತ್ತರವಾಗಿ ಸಹಾಯಕ ಅಭಿಯಂತರರು, ಬಿ.ಬಿ.ಎಂ.ಪಿ ರವರು ರಸ್ತೆಗುಂಡಿಗಳನ್ನು ಮುಚ್ಚುವ ಕೆಲಸ ಪ್ರಗತಿಯಲ್ಲಿದ್ದು, ಈಗಾಗಲೇ ಹಲವಾರು ಗುಂಡಿಗಳನ್ನು ಮುಚ್ಚಲಾಗಿರುತ್ತದೆ. ಮುಚ್ಚಿರುವ ಗುಂಡಿಗಳ ವಿವರಣೆಯನ್ನು ತಂತ್ರಾಂಶದಲ್ಲೂ ಸಹ ಬಿ.ಬಿ.ಎಂ.ಪಿ. ವಿವಿಧ ಗ್ರೂಪ್ ಗಳಲ್ಲಿ ಅಪ್ ಲೋಡ್ ಮಾಡಲಾಗಿರುತ್ತದೆ ಎಂದು ಸಭೆಗೆ ತಿಳಿಸಿರುತ್ತಾರೆ.

2. ಶ್ರೀ ವೆಂಕಟೇಶ್ , ಕರ ವಸೂಲಿಗಾರರು, ವಾರ್ಡ್ ನಂ. 101 ರವರು ಪ್ರಸ್ತುತ ಸಾಲಿನಲ್ಲಿ ನಾವು ಈಗಾಗಲೇ ಸುಮಾರು ಶೇ. 70% ರಿಂದ 80% ಕರ ವಸೂಲಿ ಮಾಡಲಾಗಿದೆ ಇನ್ನುಳಿದಂತಹ ವಸೂಲಿಯನ್ನು ತುರ್ತಾಗಿ 100% ವಸೂಲಿ ಮಾಡಲು ಕ್ರಮ ವಹಿಸಿರುತ್ತೇವೆ. ಎಂದು ತಿಳಿಸಿರುತ್ತಾರೆ.

ಸದಸ್ಯ ಕಾರ್ಯದರ್ಶಿಗಳು ಸಭೆಯಲ್ಲಿ ಹಾಜರಿದ್ದ ಮಾನ್ಯ ಅಧ್ಯಕ್ಷರಿಗೆ ವಾರ್ಡ್ ಸಮಿತಿ ಸದಸ್ಯರುಗಳಿಗೆ ಮತ್ತು ವಿವಿಧ ಇಲಾಖೆಯ ಅಧಿಕಾರಿಗಳಿಗೆ ವಂದನೆಗಳೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

22/6/22

ಸದಸ್ಯ ಕಾರ್ಯದರ್ಶಿ
ವಾರ್ಡ್ ಸಮಿತಿ

ನೋಡಲ್ ಅಧಿಕಾರಿಗಳು
ವಾರ್ಡ್ ನಂ. 101

Scanned by CamScanner